(15)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಹೆಚ್.ನರಸಿಂಹಮೂರ್ತಿ, ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ, ಇವರ ಮೇಲಿನ ಶಿಸ್ತುಕ್ರಮ ಕುರಿತು.

**ಓದಲಾಗಿದೆ:**

1. ಕೃಷಿ ಆಯುಕ್ತರ ಕಛೇರಿಯ ಪತ್ರ ಸಂಖ್ಯೆ:ಸಿಬ್ಬಂದಿ–1/ವಿಚಾರಣೆ–1/15/2010–11 ದಿನಾಂಕ: 11–07–2012.
2. ಸರ್ಕಾರದ ಕಾರಣ ಕೇಳುವ ಪತ್ರ ಸಂಖ್ಯೆ: ಕೃಇ 75 ಕೃಪವಿ 2010, ದಿನಾಂಕ: 03–11–2012.

*********

**ಪ್ರಸ್ತಾವನೆ:**

ಶ್ರೀ ಹೆಚ್.ನರಸಿಂಹಮೂರ್ತಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ, ಇವರನ್ನು ಇಲಾಖೆಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವಲ್ಲಿ ಸಮರ್ಪಕವಾಗಿ ನಿರ್ವಹಣೆ ಮಾಡದೇ ಬೇಜವಾಬ್ದಾರಿತನದಿಂದ ವರ್ತಿಸಿರುತ್ತಾರೆ ಹಾಗೂ ಕಛೇರಿಯ ನೌಕರರು ಮತ್ತು ಸಿಬ್ಬಂದಿಯವರೊಂದಿಗೆ ಅಸಭ್ಯವಾಗಿ ವರ್ತಿಸಿರುತ್ತಾರೆಂಬ ಆಪಾದನೆಗಳ ಮೇಲೆ ಇವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಕರ್ನಾಟಕ ನಾಗರಿಕ ಸೇವಾ(ಸಿ.ಸಿ.ಎ.) ನಿಯಮಾವಳಿ 1957ರ ನಿಯಮ 11ರಡಿ ದೋಷಾರೋಪಣಾ ಪಟ್ಟಿಯನ್ನು ಮೇಲೆ ಕ್ರಮ ಸಂಖ್ಯೆ(1)ರಲ್ಲಿ ಓದಲಾದ ಪತ್ರದಲ್ಲಿ ಕೃಷಿ ಆಯುಕ್ತರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಶ್ರೀ ಹೆಚ್.ನರಸಿಂಹಮೂರ್ತಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ, ಇವರಿಗೆ ಮೇಲೆ ಕ್ರಮಾಂಕ (2)ರಲ್ಲಿ ಓದಲಾದ ಪತ್ರದಲ್ಲಿ ಕಾರಣ ಕೇಳುವ ನೋಟೀಸ್‌ನ್ನು ದೋಷಾರೋಪಣೆ ಪಟ್ಟಿಯೊಡನೆ ಜಾರಿ ಮಾಡಲಾಗಿತ್ತು. ಸದರಿ ಅಧಿಕಾರಿಯವರು ಕಾರಣ ಕೇಳುವ ಪತ್ರವನ್ನು ಸ್ವೀಕರಿಸಿ, ಇಲ್ಲಿಯವರೆಗೂ ಸರ್ಕಾರಕ್ಕೆ ತಮ್ಮ ಲಿಖಿತ ಹೇಳಿಕೆಯನ್ನು ಸಲ್ಲಿಸದಿರುವುದರಿಂದ ಪ್ರಕರಣದ ಸತ್ಯಾಸತ್ಯತೆಯನ್ನು ತಿಳಿಯಲು ಇಲಾಖಾ ವಿಚಾರಣೆಯನ್ನು ನಡೆಸಲು ತೀರ್ಮಾನಿಸಿ, ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ ಆಯುಕ್ತಾಲಯ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 75 ಕೃಪವಿ 2010.**
**ಬೆಂಗಳೂರು. ದಿನಾಂಕ: 11–02–2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಹೆಚ್.ನರಸಿಂಹಮೂರ್ತಿ, ಹಿಂದಿನ ಸಹಾಯಕ ಕೃಷಿ ನಿರ್ದೇಶಕರು, ಸಿದ್ದಾಪುರ, ಉತ್ತರ ಕನ್ನಡ ಜಿಲ್ಲೆ, ಇವರ ವಿರುದ್ಧದ ಆರೋಪಗಳ

ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಸರ್ಕಾರವು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 2ರಲ್ಲಿ ಪ್ರದತ್ತವಾಗಿರುವ ಅಧಿಕಾರ ಚಲಾಯಿಸಿ ಶ್ರೀ ಎಂ.ಜಿ.ಹಿರೇಮಠ, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದೆ.

ಹಾಗೂ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 11ರ ಉಪ ನಿಯಮ 5(ಸಿ)ಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶಿಸ್ತು ಪ್ರಾಧಿಕಾರಿಯ ಪರವಾಗಿ ವಿಷಯ ಮಂಡಿಸಲು ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ ಆಯುಕ್ತಾಲಯ, ಬೆಂಗಳೂರು ಇವರನ್ನು ಮಂಡನಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ.

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

**ಇವರಿಗೆ:**

1. ಅಕೌಂಟ್ಸ್ ಅಫೀಸರ್, ಜಿ–5, ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ), ಹೊಸಕಟ್ಟಡ, ಬೆಂಗಳೂರು–1.
2. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು.
3. ಜಂಟಿ ಕೃಷಿ ನಿರ್ದೇಶಕರು, ಉತ್ತರ ಕನ್ನಡ ಜಿಲ್ಲೆ,
4. ಶ್ರೀ ಎಂ.ಜಿ. ಹಿರೇಮಠ್, ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು, ನಂ. 746, 15ನೇ ಮೈನ್, ಜುಡಿಷಿಯಲ್ ಲೇಔಟ್, ಅಲ್ಲಾಳಸಂದ್ರ, ಜಿ.ಕೆ.ವಿ.ಕೆ. ಪೋಸ್ಟ್ ಬೆಂಗಳೂರು–65.
5. ಶ್ರೀ ಮಧುಸೂದನ ಮೂರ್ತಿ, ಆಡಳಿತಾಧಿಕಾರಿ, ಕೃಷಿ ಆಯುಕ್ತಾಲಯ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಉಪ ಕಾರ್ಯದರ್ಶಿ–1 ಕೃಷಿ ಇಲಾಖೆ.
8. ಸಂಬಂಧಿಸಿದ ಅಧಿಕಾರಿಗಳಿಗೆ (ಆಯುಕ್ತರು, ಕೃಷಿ ಇಲಾಖೆ ಇವರ ಮುಖಾಂತರ).
9. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.